Akashvani : Bengaluru

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

24.09.2025 7.35hrs

ಮುಖ್ಯಾಂಶಗಳು

- ಮೊರೊಕೊದಲ್ಲಿ ಭಾರತದ ಮೊದಲ ಸಾಗರೋತ್ತರ ರಕ್ಷಣಾ ಉತ್ಪಾದನಾ ಘಟಕಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ
- ವಿಶ್ವ ಸಂಸ್ಥೆ ಮಾನವ ಹಕ್ಕುಗಳ ಮಂಡಳಿಯಲ್ಲಿ ಭಾರತ ವಿರುದ್ಧ ಪಾಕಿಸ್ತಾನದ ಆಧಾರ ರಹಿತ ಆರೋಪಕ್ಕೆ ಭಾರತ ಖಂಡನೆ
- ೮೦ ವರ್ಷಗಳ ನಂತರ ಬಿಹಾರದಲ್ಲಿ ಇಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ; ಮುಂಬರುವ ಚುನಾವಣೆ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚೆ
- ಏಷ್ಯಾ ಕಪ್ ಟಿ೨೦ ಕ್ರಿಕೆಟ್: ಶ್ರೀಲಂಕಾ ವಿರುದ್ಧ ಪಾಕಿಸ್ತಾನಕ್ಕೆ ೫ ವಿಕೆಟ್ ಜಯ; ಇಂದು ಸೂಪರ್ ಫೋರ್ ಹಂತದಲ್ಲಿ ಭಾರತ - ಬಾಂಗ್ಲಾದೇಶ ಮುಖಾಮುಖಿ

><><><><><

ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ ಸ್ಥಾಪಿಸಿರುವ ಭಾರತದ ಮೊದಲ ಸಾಗರೋತ್ತರ ರಕ್ಷಣಾ ಉತ್ಪಾದನಾ ಘಟಕವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಮೊರೊಕೊದ ರಕ್ಷಣಾ ಸಚಿವ ಅಬ್ದೆಲತೀಫ್ ಲೌಡಿ ಜಂಟಿಯಾಗಿ ನಿನ್ನೆ ಉದ್ಘಾಟಿಸಿದರು. ಭಾರತ ಮತ್ತು ಮೊರಾಕೊ ನಡುವೆ ವಿಕಸನಗೊಳ್ಳುತ್ತಿರುವ ಕಾರ್ಯತಂತ್ರದ ಸಹಭಾಗಿತ್ವದಲ್ಲಿ ಈ ಉದ್ಘಾಟನೆಯು ಒಂದು ಐತಿಹಾಸಿಕ ಕ್ಷಣ ಎಂದು ರಾಜನಾಥ್ ಸಿಂಗ್ ಬಣ್ಣಿಸಿದ್ದಾರೆ. ಭಾರತದ ಆತ್ಮನಿರ್ಭರ ಭಾರತದ ದೃಷ್ಟಿಕೋನವು ಕೇವಲ ತನ್ನದೇ ಆದ ಅಗತ್ಯಗಳನ್ನು ತಯಾರಿಸುವುದು ಮಾತ್ರವಲ್ಲದೆ, ಸುಧಾರಿತ ತಂತ್ರಜ್ಞಾನ ಮತ್ತು ಉತ್ತಮ ಗುಣಮಟ್ಟದ ಉತ್ಪನ್ನಗಳ ವಿಶ್ವಾಸಾರ್ಹ ಮೂಲವಾಗಲು ಅನುವು ಮಾಡಿಕೊಡುವ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವುದಾಗಿದೆ ಎಂದು ಸಚಿವರು ಹೇಳಿದ್ದಾರೆ. ಒಪ್ಪಂದದ ಅಡಿಯಲ್ಲಿ, ಟಿಎಎಸ್‌ಎಲ್ ಈ ವಾಹನಗಳನ್ನು ರಾಯಲ್ ಮೊರೊಕನ್ ಸೈನ್ಯಕ್ಕೆ ತಲುಪಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಮೊದಲ ಹಂತದ ವಿತರಣೆಗಳು ಮುಂದಿನ ತಿಂಗಳು ಪ್ರಾರಂಭವಾಗಲಿವೆ.

><><><><><

ಭಾರತದ ವಿರುದ್ಧ ಆಧಾರರಹಿತ ಮತ್ತು ಪ್ರಚೋದನಕಾರಿ ಹೇಳಿಕೆಗಳೊಂದಿಗೆ ವೇದಿಕೆಯನ್ನು ದುರುಪಯೋಗಪಡಿಸಿಕೊಂಡಿದ್ದಕ್ಕಾಗಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯಲ್ಲಿ ಪಾಕಿಸ್ತಾನವನ್ನು ಭಾರತ ತೀವ್ರ ತರಾಟೆಗೆ ತೆಗೆದುಕೊಂಡಿದೆ. ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯ ೬೦ನೇ ಅಧಿವೇಶನದಲ್ಲಿ ಮಾತನಾಡಿದ ವಿಶ್ವಸಂಸ್ಥೆಯ ಭಾರತದ ಖಾಯಂ ರಾಯಭಾರಿ ಕ್ಷಿತಿಜ್ ತ್ಯಾಗಿ, ಪಾಕಿಸ್ತಾನವು ಭಾರತದ ಭೂಪ್ರದೇಶವನ್ನು ಸ್ವಾಧೀನಪಡಿಸಿಕೊಳ್ಳಲು ಪ್ರಯತ್ನಿಸುವ ಬದಲು ಅದನ್ನು ಖಾಲಿ ಮಾಡಬೇಕು ಮತ್ತು ಜೀವ ರಕ್ಷಣೆಯಲ್ಲಿರುವ ತನ್ನ ಆರ್ಥಿಕತೆಯನ್ನು ರಕ್ಷಿಸುವತ್ತ ಗಮನ ಹರಿಸಬೇಕು ಎಂದು ಹೇಳಿದ್ದಾರೆ. ಪಾಕಿಸ್ತಾನವು ಮಿಲಿಟರಿ ಪ್ರಾಬಲ್ಯ ಮತ್ತು ಕಿರುಕುಳದಿಂದ ಕಳಂಕಿತವಾದ ಮಾನವ ಹಕ್ಕುಗಳ ದಾಖಲೆಯಿಂದ ಉಸಿರುಗಟ್ಟಿದ ರಾಜಕೀಯವನ್ನು

ಹೊಂದಿದೆ ಎಂದು ಅವರು ಬಿಂಬಿಸಿದ್ದಾರೆ. ಜತೆಗೆ, ಭಯೋತ್ಪಾದನೆಯನ್ನು ರಫ್ತು ಮಾಡುವುದು, ವಿಶ್ವಸಂಸ್ಥೆ ನಿಷೇಧಿಸಿದ ಭಯೋತ್ಪಾದಕರಿಗೆ ಆಶ್ರಯ ನೀಡುವುದು ಮತ್ತು ತನ್ನ ಜನರ ಮೇಲೆ ಬಾಂಬ್ ದಾಳಿ ನಡೆಸುವುದರಿಂದ ಪಾಕಿಸ್ತಾನ ಕೂಡಲೇ ಹೊರಬರಬೇಕಿದೆ ಎಂದು ತ್ಯಾಗಿ ಹೇಳಿದ್ದಾರೆ.

><><><><><

ಬಿಹಾರದ ಪಾಟ್ನಾದ ಪಕ್ಷದ ರಾಜ್ಯ ಪ್ರಧಾನ ಕಚೇರಿ ಸದಾಕತ್ ಆಶ್ರಮದಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. ೮೦ ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಕಾರ್ಯಕಾರಿ ಸಮಿತಿ ಸಭೆ ಪಾಟ್ನಾದಲ್ಲಿ ನಡೆಯುತ್ತಿದೆ. ಬಿಹಾರ ವಿಧಾನಸಭಾ ಚುನಾವಣೆ ಮತ್ತು ಮೀಸಲಾತಿ ಮಿತಿಯನ್ನು ಹೆಚ್ಚಿಸುವುದು ಸೇರಿದಂತೆ ವಿವಿಧ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಪಕ್ಷದ ಬಿಹಾರ ಉಸ್ತುವಾರಿ ಕೃಷ್ಣ ಅಲ್ಲಾವರು ಮಾಹಿತಿ ನೀಡಿದ್ದಾರೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಸೇರಿದಂತೆ ಪಕ್ಷದ ಹಿರಿಯ ನಾಯಕರು ಭಾಗವಹಿಸಲಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯನ್ನು ಪರಿಗಣಿಸಿ, ಈ ಸಭೆಯು ಬಿಹಾರ ಕಾಂಗ್ರೆಸ್ ಗೆ ಮಹತ್ವದ್ದಾಗಿದೆ. ಕಾರ್ಯಕಾರಿ ಸಮಿತಿ ಸದಸ್ಯರಲ್ಲದೆ, ತೆಲಂಗಾಣ, ಕರ್ನಾಟಕ, ಹಿಮಾಚಲ ಪ್ರದೇಶದ ಮುಖ್ಯಮಂತ್ರಿಗಳು, ಎಲ್ಲಾ ರಾಜ್ಯಗಳ ಪಕ್ಷದ ಅಧ್ಯಕ್ಷರು ಮತ್ತು ಶಾಸಕಾಂಗ ಪಕ್ಷಗಳ ಮುಖಂಡರು ಸಭೆಯಲ್ಲಿ ಭಾಗವಹಿಸಲಿದ್ದಾರೆ.

><><><><><

ಎರಡು ನೂತನ ವಂದೇ ಭಾರತ್ ಸ್ಲೀಪರ್ ರೈಲುಗಳನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವರು, ಮೊದಲ ರೈಲು ಎಲ್ಲಾ ಪರೀಕ್ಷೆಗಳು ಮತ್ತು ಪ್ರಾಯೋಗಿಕ ಸಂಚಾರವನ್ನು ಮುಕ್ತಗೊಳಿಸಿದೆ ಮತ್ತು ಎರಡನೇ ರೈಲು ಮುಂದಿನ ತಿಂಗಳ ಮಧ್ಯಭಾಗದಲ್ಲಿ ಪೂರ್ಣಗೊಳ್ಳುವ ಸಾಧ್ಯತೆಯಿದೆ ಎಂದು ಹೇಳಿದರು. ರಾತ್ರಿಯ ಪ್ರಯಾಣದಲ್ಲಿ ನಿಯಮಿತ ಸೇವೆಗಳನ್ನು ಖಚಿತಪಡಿಸಿಕೊಳ್ಳಲು ಎರಡು ರೈಲುಗಳನ್ನು ಒಟ್ಟಿಗೆ ಪ್ರಾರಂಭಿಸಬೇಕಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಇಂಟಿಗ್ರಲ್ ಕೋಚ್ ಫ್ಯಾಕ್ಟರಿ ತಂತ್ರಜ್ಞಾನವನ್ನು ಬಳಸಿಕೊಂಡು ಬಿಇಎಂಎಲ್ ತಯಾರಿಸಿದ ವಂದೇ ಭಾರತ್ ಸ್ಲೀಪರ್ ರೈಲು ೧೬ ಬೋಗಿಗಳನ್ನು ಒಳಗೊಂಡಿರುತ್ತದೆ, ಇದನ್ನು ಎಸಿ ಫಸ್ಟ್ ಕ್ಲಾಸ್, ಎಸಿ ೨-ಟೈರ್ ಮತ್ತು ಎಸಿ ೩-ಟೈರ್ ಎಂದು ವಿಂಗಡಿಸಲಾಗಿದೆ. ಈ ರೈಲಿನಲ್ಲಿ ೧ ಸಾವಿರದ ೧೨೮ ಪ್ರಯಾಣಿಕರನ್ನು ಸಾಗಿಸಬಹುದಾಗಿದ್ದು, ಗಂಟೆಗೆ ೧೮೦ ಕಿ.ಮೀ ವೇಗದಲ್ಲಿ ಕಾರ್ಯನಿರ್ವಹಿಸಲಿದೆ. ಇದು ದೇಶದ ಅತ್ಯಂತ ವೇಗದ ರಾತ್ರಿ ರೈಲು ಸೇವೆಗಳಲ್ಲಿ ಒಂದಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ದೀಪಾವಳಿ ಮತ್ತು ಛತ್ ಹಬ್ಬದ ಸಂದರ್ಭದಲ್ಲಿ ಅಕ್ಟೋಬರ್ ೧ ರಿಂದ ನವೆಂಬರ್ ೧೫ ರವರೆಗೆ ಹನ್ನೆರಡು ಸಾವಿರ ವಿಶೇಷ ರೈಲುಗಳನ್ನು ಓಡಿಸಲಾಗುವುದು ಎಂದು ರೈಲ್ವೆ ಸಚಿವರು ಪ್ರಕಟಿಸಿದ್ದಾರೆ. ಹತ್ತು ಸಾವಿರ ರೈಲುಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ ಮತ್ತು ೧೫೦ ಸಂಪೂರ್ಣ ಕಾಯ್ದಿರಿಸದ ರೈಲುಗಳನ್ನು ಕೊನೆಯ ಕ್ಷಣಗಳಲ್ಲಿ ತ್ವರಿತ ನಿಯೋಜನೆಗಾಗಿ ಸಿದ್ಧವಾಗಿಡಲಾಗುವುದು ಎಂದು ಅವರು ಹೇಳಿದ್ದಾರೆ.

><><><><><

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ

ಪರ್ವ" ದಲ್ಲಿಂದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಇಂಡಿಯಾ ಎಐ ಮಿಷನ್ ಮೂಲಕ ಭಾರತವನ್ನು ಭವಿಷ್ಯಕ್ಕಾಗಿ ಹೇಗೆ ಸಜ್ಜುಗೊಳಿಸುತ್ತಿದೆ ಎಂಬುದರ ಕುರಿತ ಒಂದು ವಿಶೇಷ ವರದಿ ಇದೀಗ ಮೂಡಿಬರಲಿದೆ.

ವರದಿ:

ಕೃತಕ ಬುದ್ಧಿಮತ್ತೆ ಎಂದರೆ ಏನು ಸಾಧ್ಯ ಎಂಬುದನ್ನು ಮರು ವ್ಯಾಖ್ಯಾನಿಸುವ ಮತ್ತು ನಾವು ಹೇಗೆ ಬದುಕುತ್ತೇವೆ, ಕೆಲಸ ಮಾಡುತ್ತೇವೆ ಮತ್ತು ಯೋಚಿಸುತ್ತೇವೆ ಎಂಬುದನ್ನು ಬದಲಾಯಿಸುವ ಕ್ರಾಂತಿಯಾಗಿದೆ. ಕೇಂದ್ರ ಸರ್ಕಾರ ಕಳೆದ ವರ್ಷ ಮಾರ್ಚ್‌ನಲ್ಲಿ ೧೦ ಸಾವಿರದ ೩೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚ ಇಂಡಿಯಾ ಎಐ ಮಿಷನ್ ಅನ್ನು ಅನುಮೋದಿಸಿತು, ಭಾರತವು ಎಐ ಅಭಿವೃದ್ಧಿ ಮತ್ತು ಅಳವಡಿಕೆಯಲ್ಲಿ ಪ್ರಮುಖ ರಾಷ್ಟ್ರಗಳಲ್ಲಿ ಒಂದಾಗಿದೆ; ಕೃತಕ ಬುದ್ಧಿಮತ್ತೆಯನ್ನು ಭಾರತಕ್ಕಾಗಿ ಕೆಲಸ ಮಾಡುವಂತೆ ಮಾಡುವುದು ಇದರ ಉದ್ದೇಶ ಎಂದು ಪ್ರಧಾನಿ ಹೇಳಿದ್ದಾರೆ...

ಧ್ವನಿ: ಪ್ರಧಾನಿ

ಇಂಡಿಯಾಎಐ ಮಿಷನ್‌ಗೆ ಬೃಹತ್ ಕಂಪ್ಯೂಟ್ ಸಾಮರ್ಥ್ಯ ಮತ್ತು ನಾವೀನ್ಯತೆ ಕೇಂದ್ರಗಳನ್ನು ನಿರ್ಮಿಸುವುದು, ಡೇಟಾಸೆಟ್‌ಗಳನ್ನು ಅಭಿವೃದ್ಧಿಪಡಿಸುವುದು, ನವೋದ್ಯಮಗಳನ್ನು ಪೋಷಿಸುವುದು ಮತ್ತು ಎಐನ ಸುರಕ್ಷಿತ ಮತ್ತು ವಿಶ್ವಾಸಾರ್ಹ ಬಳಕೆಯನ್ನು ಖಚಿತಪಡಿಸುವುದು - ಇವುಗಳೇ ಆಧಾರವಾಗಿದೆ. ಕಡಿಮೆ ಸಮಯದಲ್ಲಿ, ಭಾರತವು ವಿಶ್ವದ ಅತ್ಯಂತ ಕೈಗೆಟುಕುವ ಸಾಮಾನ್ಯ ಕಂಪ್ಯೂಟ್ ಸೌಲಭ್ಯವನ್ನು ಲಭ್ಯವಾಗುವಂತೆ ಮಾಡಿದೆ. ಇಂಡಿಯಾಎಐ ಉಪಕ್ರಮ ದೇಶವನ್ನು ಜವಾಬ್ದಾರಿಯುತ ಮತ್ತು ಎಲ್ಲರನ್ನೂ ಒಳಗೊಂಡ ಕೃತಕ ಬುದ್ಧಿಮತ್ತೆ ಬಳಕೆಯಲ್ಲಿ ಮುಂಚೂಣಿಯಲ್ಲಿಡುವ ಮತ್ತು ೨೦೪೭ ರ ವೇಳೆಗೆ ವಿಕಸಿತ ಭಾರತದ ಡಿಜಿಟಲ್ ಅಡಿಪಾಯವನ್ನು ನಿರ್ಮಿಸುವ ಒಂದು ದೃಷ್ಟಿಕೋನ ಹೊಂದಿದೆ.

><><><><><

ಮಧ್ಯಮ ಶ್ರೇಣಿಯ ಹವಾಮಾನ ಮುನ್ಸೂಚನೆಯ ರಾಷ್ಟ್ರೀಯ ಕೇಂದ್ರ ನಿನ್ನೆ ದೆಹಲಿಯಲ್ಲಿ ಬಾಹ್ಯಾಕಾಶ ಇಲಾಖೆಯ ವಾಣಿಜ್ಯ ವಿಭಾಗದ ನ್ಯೂ ಸ್ಪೇಸ್ ಇಂಡಿಯಾ ಲಿಮಿಟೆಡ್ ನೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಮಿಷನ್ ಮೌಸಮ್ ಯೋಜನೆಯ ಭಾಗವಾಗಿ ಎರಡು ನೇರ ಪ್ರಸಾರ ಜಾಲ ಕೇಂದ್ರಗಳನ್ನು ಸ್ಥಾಪಿಸುವ ಗುರಿಯನ್ನು ಈ ತಿಳಿವಳಿಕೆ ಒಪ್ಪಂದವು ಹೊಂದಿದೆ. ಒಂದು ದೆಹಲಿ-ಎನ್ ಸಿಆರ್ ನಲ್ಲಿ ಮತ್ತು ಇನ್ನೊಂದು ಚೆನ್ನೈನಲ್ಲಿ ನಿರ್ಮಿಸಲಾಗುತ್ತದೆ. ಪ್ರಸ್ತಾವಿತ ಕೇಂದ್ರಗಳು ಅಸ್ತಿತ್ವದಲ್ಲಿರುವ ವಿವಿಧ ಭಾರತೀಯ ಮತ್ತು ಅಂತಾರಾಷ್ಟ್ರೀಯ ಭೂ ವೀಕ್ಷಣಾ ವ್ಯವಸ್ಥೆ ಉಪಗ್ರಹಗಳಿಂದ ನೇರ ಪ್ರಸಾರ ದತ್ತಾಂಶವನ್ನು ಸ್ವೀಕರಿಸುವ ಸಾಮರ್ಥ್ಯವನ್ನು ಇವು ಹೊಂದಿರುತ್ತವೆ.

><><><><><

ವರ್ಷದ ಅತ್ಯಂತ ಶಕ್ತಿಶಾಲಿ ಚಂಡಮಾರುತವಾದ ರಗಾಸಾ ದಕ್ಷಿಣ ಕರಾವಳಿಯನ್ನು ಸಮೀಪಿಸುತ್ತಿದ್ದಂತೆ ಚೀನಾ ೩ ಲಕ್ಷ ೭೦ ಸಾವಿರಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದೆ. ಕನಿಷ್ಠ ೧೦ ನಗರಗಳಲ್ಲಿ ಶಾಲೆ ಮತ್ತು ಇತರ ವ್ಯವಹಾರಗಳನ್ನು ಮುಚ್ಚಲು ಅಧಿಕಾರಿಗಳು ಆದೇಶಿಸಿದ್ದಾರೆ.

><><><><><

ಯುನೈಟೆಡ್ ಅರಬ್ ಎಮಿರೇಟನ್ಸ್ ನ ಅಬುಧಾಬಿಯ ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪುರುಷರ ಟಿ೨೦ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಸೂಪರ್ ೪ ಹಂತದ ಪಂದ್ಯದಲ್ಲಿ ಪಾಕಿಸ್ತಾನ ತಂಡವು ೫ ವಿಕೆಟ್ ಗಳ ಅಂತರದಿಂದ ಶ್ರೀಲಂಕಾ ತಂಡದ ವಿರುದ್ಧ ಭರ್ಜರಿ ಗೆಲುವು ಸಾಧಿಸಿದೆ. ಶ್ರೀಲಂಕಾ ಒಡ್ಡಿದ ೧೩೪ ರನ್ ಗಳ ಗುರಿ ಬೆನ್ನತ್ತಿದ ಪಾಕಿಸ್ತಾನ ತಂಡ ೧೮ ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೩೮ ರನ್ ಗಳಿಸಿತು. ಈ ಗೆಲುವು ಏಷ್ಯಾಕಪ್ ಫೈನಲ್ ಗೆ ಅರ್ಹತೆ ಪಡೆಯುವ ಪಾಕಿಸ್ತಾನದ ಆಸೆಯನ್ನು ಜೀವಂತವಾಗಿಟ್ಟಿದೆ.  ಇಂದು ದುಬೈ ಕ್ರಿಕೆಟ್ ಕ್ರೀಡಾಂಗಣದಲ್ಲಿ ಭಾರತ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

><><><END><><><